ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 23ನೇ ಮಾರ್ಚ್, 2020

ಬಾಗಲಕೋಟೆ ಜಿಲ್ಲೆ ಬೀಳಗಿ ತಾಲ್ಲೂಕಿನ ಚಿಕ್ಕ ಸಂಗಮದಲ್ಲಿರುವ ನಡುಗಡ್ಡೆಯ ಬಗ್ಗೆ

ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :-

1453 (1674) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಆಲಮಟ್ಟಿ ಹಿನ್ನೀರಿನಲ್ಲಿ ಯಾವ ಯಾವ ರಾಜ್ಯದ ಪಕ್ಷಿಗಳು ಹಾಗೂ ಯಾವ ಯಾವ ರಾಷ್ಟ್ರದ ಪಕ್ಷಿಗಳು ವಲಸೆ ಬರುತ್ತಿದೆ ;

(ಆ) ಆಲಮಟ್ಟಿ ಹಿನ್ನೀರಿನ ಪ್ರದೇಶದಲ್ಲಿ, ದೇಶದ ವಿವಿಧ ರಾಜ್ಯಗಳಿಂದ ಮತ್ತು ಜಗತ್ತಿನ ವಿವಿಧ ದೇಶಗಳಿಂದ ಬರುವ ಪಕ್ಷಿಗಳ ಸಂರಕ್ಷಣೆಗಾಗಿ ಸರ್ಕಾರ ಯಾವ ಕ್ರಮ ಕೈಗೊಂಡಿದೆ ; ಕ್ರಮ ತೆಗೆದುಕೊಳ್ಳದಿದ್ದರೆ ಕಾರಣ ನೀಡುವುದು ಇವುಗಳನ್ನು ಪ್ರವಾಸಿಗರಿಗೆ ವೀಕ್ಷಿಸುವ ವ್ಯವಸ್ಥೆ ಮಾಡಲಾಗಿದೆಯೇ ; ಮಾಡಿದ್ದಲ್ಲಿ ಯಾವ ಯಾವ ಸ್ಥಳಗಳನ್ನು ಆಯ್ಕೆ ಮಾಡಿಕೊಳ್ಳಲಾಗಿದೆ ; ಆಯ್ಕೆ ಮಾಡದಿದ್ದರೆ ಕಾರಣ ನೀಡುವುದು ;

(ಇ) ಆಲಮಟ್ಟಿ ಹಿನ್ನೀರಿನಲ್ಲಿ ಸಕಲ ಜಲಚರಗಳು ಬದುಕನ್ನು ಕಾಪಾಡುವುದು ಸರ್ಕಾರದ ಕರ್ತವ್ಯವಾಗಿದ್ದು ಪ್ರತಿವರ್ಷ ಬೇಸಿಗೆಯಲ್ಲಿ ಅಣೆಕಟ್ಟಿನ ಹಿನ್ನೀರು ಬತ್ತಿಹೋಗುವ ಹಿನ್ನೆಲೆಯಲ್ಲಿ ಜಲಚರಗಳ ಜೀವ ಕಳೆದುಕೊಳ್ಳುತ್ತಿದ್ದು ಇವುಗಳಿಗಾಗಿ ಗರಿಷ್ಟ ಮಟ್ಟ ನೀರು ಸಂಗ್ರಹಿಸಲು ಕ್ರಮ ಕೈಗೊಳ್ಳಲಾಗುವುದೇ ;

(ಈ) ಬಾಗಲಕೋಟೆ ಜಿಲ್ಲೆಯ ಬೀಳಗಿ ತಾಲ್ಲೂಕಿನ ಚಿಕ್ಕ ಸಂಗಮ ದೇವಸ್ಥಾನದ ಎದುರು ನಡುಗಡ್ಡೆ ಪ್ರದೇಶವನ್ನು ಪಕ್ಷಿಧಾಮ ಮಾಡುವ ಕಾಮಗಾರಿ ಯಾವ ಹಂತದಲ್ಲಿದೆ ; ಕಾಮಗಾರಿ ಕೈಗೊಳ್ಳದಿದ್ದಲ್ಲಿ ಕಾರಣವೇನು ;

(ಉ) ಆಲಮಟ್ಟಿ ಹಿನ್ನೀರಿನಿಂದ ಸುಮಾರು ನೂರಾರು ಹಳ್ಳಿಗಳಲ್ಲಿ ರಾಜ್ಯದ ಸಂಶೋಧಕರು ಮತ್ತು ಸಂಸ್ಕೃತಿ ಚಿಂತಕರು ಕೃಷಿಗೆ ಸಂಬಂಧಿಸಿದ ಸಾಮಗ್ರಿಗಳನ್ನು ಈಗಾಗಲೇ ಸಂಗ್ರಹಿಸಿ ಬಾಗಲಕೋಟೆಯ ನವನಗರದಲ್ಲಿರುವ ಜಾನಪದ ಸಂಗ್ರಹಾಲಯಕ್ಕೆ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಒಟ್ಟು ಎಷ್ಟು ಸಾಮಗ್ರಿಗಳನ್ನು ಸಂಗ್ರಹಿಸಿದ್ದಾರೆ ಮತ್ತು ಅವುಗಳನ್ನು ಸಂರಕ್ಷಣೆಗೆ ಸರ್ಕಾರ ಕ್ರಮ ಕೈಗೊಂಡಿದೆಯೇ ?